ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**1376**
ವಿಧಾನ ಪರಿಷತ್ತು ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ ಅರಳಿ
ಉತ್ತರಿಸಬೇಕಾದ ದಿನಾಂಕ	:	16.03.2021
ಉತ್ತರಿಸುವ ಸಚಿವರು	:	ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>2018-19 ರಿಂದ 2020-21ರವರೆಗೆ ಬೀದರ್ ಜಿಲ್ಲೆಯಲ್ಲಿ ರದ್ದುಗೊಳಿಸಲಾದ ಬಿ.ಪಿ.ಎಲ್ ಕಾರ್ಡ್ ಗಳ ಸಂಖ್ಯೆ ಎಷ್ಟು; ಮತ್ತು ಹೊಸದಾಗಿ ವಿತರಿಸಲಾದ ಬಿ.ಪಿ.ಎಲ್ ಕಾರ್ಡ್ ಗಳ ಸಂಖ್ಯೆ ಎಷ್ಟು;</td><td>ಬೀದರ್ ಜಿಲ್ಲೆಯಲ್ಲಿ 2018-19 ರಿಂದ 2020-21 ರವರೆಗೆ ಈ ಕೆಳಕಂಡ ಅನರ್ಹ ಪಡಿತರ ಚೀಟಿಗಳನ್ನು ರದ್ದುಗೊಳಿಸಲಾಗಿರುತ್ತದೆ.
<table>
<tr><td>ಜಿಲ್ಲೆ</td><td colspan="3">ಕಳೆದ ಮೂರು ವರ್ಷಗಳಲ್ಲಿ ರದ್ದುಪಡಿಸಲಾದ ಅನರ್ಹ ಪಡಿತರ ಚೀಟಿಗಳು</td></tr>
<tr><td></td><td>ಅಂತ್ಯೋದಯ ಅನ್ನ ಪಡಿತರ ಚೀಟಿಗಳು</td><td>ಆದ್ಯತಾ ಪಡಿತರ ಚೀಟಿಗಳು</td><td>ಒಟ್ಟು</td></tr>
<tr><td>ಬೀದರ್</td><td>173</td><td>2631</td><td>2804</td></tr>
</table>
2018-19 ರಿಂದ 2020-21 ರವರೆಗೆ ಬೀದರ್ ಜಿಲ್ಲೆಯಲ್ಲಿ ಒಟ್ಟು 1,30,888 ಆದ್ಯತಾ ಪಡಿತರ ಚೀಟಿ ಕೋರಿ ಅರ್ಜಿಗಳು ಸ್ವೀಕೃತವಾಗಿದ್ದು, ಇದರಲ್ಲಿ 74,374 ಅರ್ಜಿಗಳನ್ನು ಅನುಮೋದಿಸಲಾಗಿರುತ್ತದೆ. 46,761 ಅರ್ಜಿಗಳು ತಿರಸ್ಕೃತವಾಗಿದ್ದು, 9,753 ಅರ್ಜಿಗಳು ವಿಲೇವಾರಿಗೆ ಬಾಕಿ ಇರುತ್ತದೆ.</td></tr>
<tr><td>ಆ</td><td>ಅಕ್ರಮ ದಾಖಲೆ ಮತ್ತು ಸುಳ್ಳು ಮಾಹಿತಿ ನೀಡಿ ಬಿ.ಪಿ.ಎಲ್ ಪಡಿತರ ಚೀಟಿ ಪಡೆದುಕೊಂಡವರ ಪತ್ತೆ ಹಚ್ಚುವ ಕಾರ್ಯವನ್ನು ಸರ್ಕಾರ ಮಾಡಿದೆಯೇ; ಮಾಡಿದ್ದಲ್ಲಿ ಕಾನೂನು ಬಾಹಿರ ಬಿ.ಪಿ.ಎಲ್ ಚೀಟಿ ಪಡೆದವರ ಸಂಖ್ಯೆ ಎಷ್ಟು?</td><td>ಸರ್ಕಾರದಿಂದ ಅನರ್ಹ ಪಡಿತರ ಚೀಟಿಗಳನ್ನು ಪತ್ತೆ ಹಚ್ಚುವ ಕಾರ್ಯ ನಿರಂತರವಾಗಿ ನಡೆಯುತ್ತಿದ್ದು, ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಇದುವರೆಗೆ 2,28,188 ಆದ್ಯತಾ (ಬಿಪಿಎಲ್) ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ರದ್ದುಪಡಿಸಲಾಗಿದೆ. ರೂ.3,07,36,170ಗಳ ದಂಡವನ್ನು ವಸೂಲಿ ಮಾಡಲಾಗಿದೆ.</td></tr>
</table>

ಆನಾಸ 108 ಡಿಆರ್‌ಎ 2021 (ಇ-ಆಫೀಸ್)

(ಉಮೇಶ್ ವಿ. ಕತ್ತಿ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.